## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು Online ಮೂಲಕ ಮಂಜೂರು ಮಾಡುವ ಕುರಿತು

**ಓದಲಾಗಿದೆ:** 1.ಸರ್ಕಾರದ ಆದೇಶ ಸಂಖ್ಯೆ : ಸಕಇ 607 ಪಕವಿ 2017 , ಬೆಂಗಳೂರು, ದಿನಾಂಕ:22.02.2018

2.ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಕನಿ/ಇಡಿ-7ಪರೋ.ಧ/2022- 23 ದಿನಾಂಕ:01.07.2022

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಮೆಟ್ರಿಕ್ ನಂತರದ ವಿವಿಧ ಕೋರ್ಸ್‌ಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಪಡೆಯಲು ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ, ಅರ್ಹ ಪ.ಜಾತಿ ವಿದ್ಯಾರ್ಥಿಗಳಿಗೆ Online ಮೂಲಕ ಅರ್ಜಿ ಪಡೆದು ಅವರ ಆಧಾರ್ ಜೋಡಿತ ಬ್ಯಾಂಕ್ ಖಾತೆಗಳಿಗೆ DBT ಮುಖಾಂತರ ಪ್ರೋತ್ಸಾಹಧನವನ್ನು ಮಂಜೂರು ಮಾಡುವ ಪೂರ್ವದಲ್ಲಿ ಫಲಾನುಭವಿಗಳನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಸಮಿತಿ ಮೂಲಕ ಆಯ್ಕೆ ಮಾಡಲು ಆದೇಶ ಹೊರಡಿಸಲಾಗಿರುತ್ತದೆ.

ಸದರಿ ಕಾರ್ಯಕ್ರಮ ಸಕಾಲ ಯೋಜನೆ ವ್ಯಾಪ್ತಿಯಲ್ಲಿ ಬರುವುದರಿಂದ ನಿಗಧಿತ ದಿನಾಂಕ ದೊಳಗೆ ಪ್ರೋತ್ಸಾಹಧನವನ್ನು ಮಂಜೂರು ಮಾಡಬೇಕಾಗಿರುತ್ತದೆ. ಅದರಂತೆ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪ.ಜಾ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿಗಳನ್ನು ಸಂಬಂಧಪಟ್ಟ ಕಛೇರಿಗೆ ನೀಡಿದ ತಕ್ಷಣ ಅರ್ಜಿಗಳನ್ನು ಪರಿಶೀಲಿಸಿ, ಅನುಮೋದನೆ ನೀಡಲಾದರೂ, ಫಲಾನುಭವಿಗಳನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಸಮಿತಿಯ ಅನುಮೋದನೆ ಪಡೆದು ಪ್ರೋತ್ಸಾಹ ಧನ ಮಂಜೂರು ಮಾಡುವ ಪ್ರಕ್ರಿಯೆಯು ವಿಳಂಬದ ಜೊತೆಗೆ ಸದರಿ ಯೋಜನೆಯಡಿ ಬಿಲ್ಲುಗಳು ಮೇಲು ಸಹಿಗಾಗಿ ಸಲ್ಲಿಕೆಯಾಗುತ್ತಿದ್ದು, ಸಕಾಲದಲ್ಲಿ ಫಲಾನುಭವಿಗಳಿಗೆ ಪ್ರೋತ್ಸಾಹಧನವನ್ನು ಮಂಜೂರು ಮಾಡಲು ಸಾಧ್ಯವಾಗದ ಕಾರಣ ಈಗಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 607 ಪಕವಿ 2017, ದಿನಾಂಕ: 22-02-2018 ರ ಆದೇಶದಲ್ಲಿ ಸೂಚಿಸಿರುವಂತೆ ಅಪರ ಜಿಲ್ಲಾಧಿಕಾರಿಗಳ ಸಮಿತಿಯ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡುವ ಪದ್ಧತಿಯನ್ನು ಕೈಬಿಟ್ಟು ನೇರವಾಗಿ Online ಮೂಲಕ ಅರ್ಜಿ ಪಡೆದು ಪ್ರೋತ್ಸಾಹಧನವನ್ನು ಮಂಜೂರು ಮಾಡುವ ಕುರಿತು ಪರಿಷ್ಕೃತ ಆದೇಶ ಹೊರಡಿಸಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಏಕ ಕಡತ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಮೇಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಮೇಲ್ಕಂಡ ಕ್ರಮಸಂಖ್ಯೆ (1)ರಲ್ಲಿನ ಸಮಿತಿಯನ್ನು ರದ್ದುಪಡಿಸಲು ನಿರ್ಧರಿಸಿ, ಕೆಳಕಂಡಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 205 ಪಕವಿ 2022 , ಬೆಂಗಳೂರು, ದಿನಾಂಕ:09.09.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಮೆಟ್ರಿಕ್ ನಂತರದ ವಿವಿಧ ಕೋರ್ಸ್‌ಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆಗೆ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ Online ಮೂಲಕ ಅರ್ಜಿ

ಪಡೆದು ಅವರ ಆಧಾರ್ ಜೋಡಿತ ಬ್ಯಾಂಕ್ ಖಾತೆಗಳಿಗೆ DBT ಮುಖಾಂತರ ಪ್ರೋತ್ಸಾಹಧನವನ್ನು ಮಂಜೂರು ಮಾಡುವ ಪೂರ್ವದಲ್ಲಿ ಫಲಾನುಭವಿಗಳನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಸಮಿತಿ ಮೂಲಕ ಆಯ್ಕೆ ಮಾಡುವ ಪದ್ಧತಿಯನ್ನು ಕೈಬಿಟ್ಟು ನೇರವಾಗಿ Online ಮೂಲಕ ಅರ್ಜಿಪಡೆದು ಅರ್ಹ ಫಲಾನುಭವಿಗಳಿಗೆ ಪ್ರೋತ್ಸಾಹಧನವನ್ನು ಮಂಜೂರು ಮಾಡುವಂತೆ ಮಾರ್ಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಪ್ರಜಾ. ಅಮ್ಮೆಂಬಳ)
ಸರ್ಕಾರದ ಉಪ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು ಲೆಕ್ಕ ಪತ್ರ: ಲೆಕ್ಕಪರಿಶೋಧನೆ) ಪಾರ್ಕ್ ರಸ್ತೆ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
5) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
6) ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
7) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ.
8) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
9) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
10) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಾಹಕಣಾಧಿಕಾರಿಗಳು.
11) ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ
12) ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
13) ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
14) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ :

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ-1 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.